ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1090
ಸದಸ್ಯರ ಹೆಸರು	ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	21.09.2021.
ಉತ್ತರಿಸುವ ಸಚಿವರು	ಗಣಿ ಮತ್ತು ಭೂವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಸಚಿವರು.

ಕ್ರ. ಸಂ.	ಪ್ರಶ್ನೆಗಳು	ಉತ್ತರ
ಅ.	ಕೊಡಗು ಜಿಲ್ಲೆಯಲ್ಲಿ ಬೇಡಿಕೆಗನುಗುಣವಾಗಿ ಮರಳು ದೊರೆಯದೆ, ನಿರ್ಮಾಣ ಕಾಮಗಾರಿಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	• ಕೊಡಗು ಜಿಲ್ಲೆಯಲ್ಲಿ ಟೆಂಡರ್-ಕಂ-ಹರಾಜು ಮೂಲಕ ನದಿ ಪಾತ್ರದ 17 ಮರಳು ಬ್ಲಾಕ್‌ಗಳಿಗೆ ಗುತ್ತಿಗೆಗಳನ್ನು ಮಂಜೂರು ಮಾಡಲಾಗಿದ್ದು, ಸದರಿ ಗುತ್ತಿಗೆ ಪ್ರದೇಶಗಳಿಂದ ಜಿಲ್ಲೆಯ ಸಾರ್ವಜನಿಕ ಹಾಗೂ ಸರ್ಕಾರಿ ಕಾಮಗಾರಿಗಳಿಗೆ ಮರಳು ಪೂರೈಕೆಯಾಗುತ್ತಿರುತ್ತದೆ. • ಕೊಡಗು ಜಿಲ್ಲಾ ವ್ಯಾಪ್ತಿಯಲ್ಲಿ 04 ಕ್ರಷರ್ ಘಟಕಗಳಲ್ಲಿ ಎಂ-ಸ್ಯಾಂಡ್‌ನ್ನು ಉತ್ಪಾದಿಸಿ, ಜಿಲ್ಲೆಯ ಸಾರ್ವಜನಿಕ ಹಾಗೂ ಸರ್ಕಾರಿ ಕಾಮಗಾರಿಗಳಿಗೆ ಪೂರೈಸಲಾಗುತ್ತಿದೆ. • ಅಲ್ಲದೆ, ಕೊಡಗು ಜಿಲ್ಲೆಗೆ ಹಾಸನ ಮತ್ತು ಮೈಸೂರು ಜಿಲ್ಲೆಗಳಿಂದ ಎಂ-ಸ್ಯಾಂಡ್ ಪೂರೈಕೆಯಾಗುತ್ತಿರುತ್ತದೆ. • ಮೇಲ್ಕಂಡಂತೆ, ಕೊಡಗು ಜಿಲ್ಲೆಗೆ ಬೇಡಿಕೆಗನುಸಾರ ಮರಳು ಪೂರೈಕೆ ಆಗುತ್ತಿರುವುದರಿಂದ, ಜಿಲ್ಲೆಯ ಸಾರ್ವಜನಿಕ ಹಾಗೂ ಸರ್ಕಾರಿ ನಿರ್ಮಾಣ ಕಾಮಗಾರಿಗಳಿಗೆ ಮರಳಿನ ಕೊರತೆ ಉಂಟಾಗಿರುವುದು ಕಂಡು ಬಂದಿರುವುದಿಲ್ಲ.
ಆ.	ಬಂದಿದ್ದಲ್ಲಿ, ಹೊಳೆಯಿಂದ ಮರಳು ತೆಗೆದು ನಿರ್ಮಾಣ ಕಾಮಗಾರಿಗಳಿಗೆ ದೊರೆಯುವಂತೆ ಮಾಡಲು ಸರ್ಕಾರ ಕ್ರಮ ಕೈಗೊಂಡಿದೆಯೇ;	ಕೊಡಗು ಜಿಲ್ಲೆಯ ಸಾರ್ವಜನಿಕ ಹಾಗೂ ಸರ್ಕಾರಿ ನಿರ್ಮಾಣ ಕಾಮಗಾರಿಗಳಿಗೆ ಬೇಡಿಕೆಗನುಸಾರ ಮರಳು ಪೂರೈಕೆಯಾಗುತ್ತಿರುತ್ತದೆ. ಆದ್ದರಿಂದ, ಕೊಡಗು ಜಿಲ್ಲಾ ವ್ಯಾಪ್ತಿಯ ಸಾರ್ವಜನಿಕ ಹಾಗೂ ಸರ್ಕಾರಿ ನಿರ್ಮಾಣ ಕಾಮಗಾರಿಗಳಿಗೆ ಮರಳು ಕೊರತೆಯ ಪ್ರಶ್ನೆ ಉದ್ಭವಿಸುವುದಿಲ್ಲ.

ಇ.	ಕ್ರಮ ಕೈಗೊಂಡಿದ್ದಲ್ಲಿ, ಜಿಲ್ಲೆಯಲ್ಲಿನ ನಿರ್ಮಾಣ ಕಾಮಗಾರಿಗಳಿಗೆ ಬೇಡಿಕೆಗೆ ಅನುಗುಣವಾಗಿ ಮರಳು ದೊರೆಯುತ್ತಿದೆಯೇ? (ವಿವರ ನೀಡುವುದು)	ಕೊಡಗು ಜಿಲ್ಲೆಯಲ್ಲಿ ಪ್ರಸ್ತುತ 17 ನದಿ ಪಾತ್ರದ ಮರಳು ಗುತ್ತಿಗೆ ಪ್ರದೇಶಗಳಿಂದ ಮರಳು ಹಾಗೂ 04 ಕ್ರಷರ್ ಘಟಕಗಳಿಂದ ಎಂ-ಸ್ಯಾಂಡ್ ಪೂರೈಕೆಯಾಗುತ್ತಿರುತ್ತದೆ. ಮುಂದುವರೆದು, ಪಕ್ಕದ ಮೈಸೂರು ಮತ್ತು ಹಾಸನ ಜಿಲ್ಲೆಗಳಿಂದ ನಿರ್ಮಾಣ ಕಾಮಗಾರಿಗಳಿಗೆ ಎಂ-ಸ್ಯಾಂಡ್ ಪೂರೈಕೆಯಾಗುತ್ತಿರುತ್ತದೆ. ಆದ್ದರಿಂದ, ಕೊಡಗು ಜಿಲ್ಲಾ ವ್ಯಾಪ್ತಿಯ ಸಾರ್ವಜನಿಕ ಹಾಗೂ ಸರ್ಕಾರಿ ನಿರ್ಮಾಣ ಕಾಮಗಾರಿಗಳಿಗೆ ಮರಳು ಕೊರತೆಯ ಪ್ರಶ್ನೆ ಉದ್ಭವಿಸುವುದಿಲ್ಲ.

ಸಂಖ್ಯೆ ಸಿಐ 485 ಎಂಎಂಎನ್ 2021

(ಆಚಾರ್ ಹಾಲಪ್ಪ ಬಸಪ್ಪ)
ಗಣಿ ಮತ್ತು ಭೂ ವಿಜ್ಞಾನ ಹಾಗೂ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು
ವಿಕಲಚೇತನರ, ಹಿರಿಯ ನಾಗರಿಕರ
ಸಬಲೀಕರಣ ಸಚಿವರು.